## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1077 (1125) |
| ಸದಸ್ಯರ ಹೆಸರು | : | ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.03.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ನೌಕರರು ಮತ್ತು ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಆದೇಶ/ಸುತ್ತೋಲೆಗಳನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ. ಯಾವ ದಿನಾಂಕದಿಂದ ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡಲು ಸೂಚಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಹೌದು,<br><br>ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಈ ಕೆಳಕಂಡ ಅಧಿಸೂಚನೆ/ಆದೇಶ ಹೊರಡಿಸಿದ ದಿನಾಂಕದಿಂದ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡಲು ಸೂಚಿಸಲಾಗಿದೆ.<br><br>• ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 113 ಸೇವನೆ 2018, ದಿನಾಂಕ: 08.03.2019<br>• ಆದೇಶ ಸಂಖ್ಯೆ:ಸಿಆಸುಇ 09 ಕತವ 2018, ದಿನಾಂಕ: 05.04.2019. |
| ಆ) | ಹಾಗಿದ್ದಲ್ಲಿ, ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್ ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಮಾಡಲಾಗುತ್ತಿದೆ; ಆನ್ ಲೈನ್‌ನಲ್ಲಿ ದಾಖಲೆ ಹಾಗೂ ನಿರ್ವಹಣೆ ಮಾಡದಿರಲು ಕಾರಣಗಳೇನು; ಯಾವ ದಿನಾಂಕದಿಂದ ಮಾಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು) | • ಶಾಲಾ ಶಿಕ್ಷಣ ಇಲಾಖೆಯಲ್ಲಿ ಗ್ರೂಪ್ "ಎ" ವೃಂದದ ಎಲ್ಲಾ ಅಧಿಕಾರಿಗಳಿಗೆ 2018-19 ನೇ ಸಾಲಿನಿಂದ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>• ಗ್ರೂಪ್ "ಬಿ" ವೃಂದದ 2581 ಅಧಿಕಾರಿಗಳಿಗೆ 2020-21 ನೇ ಸಾಲಿನಿಂದ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |

| | | |
|---|---|---|
| | | • ಉಳಿದ 3497 ಅಧಿಕಾರಿಗಳಿಗೆ edukar domain ಇ-ಮೇಲ್ ಗಳನ್ನು ನೀಡುವಂತೆ NIC ರವರನ್ನು ಕೋರಲಾಗಿದೆ. ಇ-ಮೇಲ್ ಐಡಿಗಳ ಹಂಚಿಕೆಯಾದ ತಕ್ಷಣ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ದಾಖಲಿಸಲು ಕ್ರಮವಹಿಸಲಾಗುವುದು.<br><br>ಶಾಲಾ ಶಿಕ್ಷಣ ಇಲಾಖೆಯಲ್ಲಿ ಸುಮಾರು 2 ಲಕ್ಷಕ್ಕೂ ಅಧಿಕ ಗ್ರೂಪ್ "ಸಿ" ವೃಂದದ ನೌಕರರುಗಳು ಕಾರ್ಯನಿರ್ವಹಿಸುತ್ತಿದ್ದು, edukar domain ಇ-ಮೇಲ್ ಗಳನ್ನು ನೀಡುವಂತೆ NIC ರವರನ್ನು ಕೋರಲಾಗಿದೆ. ಇ-ಮೇಲ್ ಐಡಿಗಳ ಹಂಚಿಕೆಯಾದ ತಕ್ಷಣ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ದಾಖಲಿಸಲು ಕ್ರಮವಹಿಸಲಾಗುವುದು |
| ಇ) | ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು e-PRS (e-Performance Reporting System) ತಂತ್ರಾಂಶದ ಮೂಲಕ ದಾಖಲಿಸಲು ಹಾಗೂ ಈ ಉದ್ದೇಶಕ್ಕಾಗಿ Custodian, Alternate Custodian, PAR Manager ಗಳನ್ನು ಗುರುತಿಸಲಾಗಿದೆಯೇ; ಗುರುತಿಸದಿರಲು ಕಾರಣಗಳೇನು; ಯಾವಾಗ ಗುರುತಿಸಲಾಗುವುದು; | ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್ ನಲ್ಲಿ ನಿರ್ವಹಿಸಲು Custodian, Alternate Custodian, PAR Manager ಗಳನ್ನು ಗುರುತಿಸಲಾಗಿರುತ್ತದೆ. |
| ಈ) | ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್ ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸರ್ಕಾರದ ನಿಲುವೇನು; | ಶಾಲಾ ಶಿಕ್ಷಣ ಇಲಾಖೆಯ ಗ್ರೂಪ್ ಎ ಮತ್ತ ಬಿ ವೃಂದದ ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಯನ್ನು ಆನ್ ಲೈನ್ ತಂತ್ರಾಂಶ ಸ್ಪ್ಯಾರೋ/ ಇ ಪಾರ್ ಕಡ್ಡಾಯವಾಗಿ ಅಳವಡಿಸಿಕೊಳ್ಳುವಂತೆ ಜ್ಞಾಪನ ಸಂಖ್ಯೆ: ಇ-ಆಡಳಿತ/ 786217/ 2022-23, ದಿನಾಂಕ: 19.11.2024 ರಲ್ಲಿ ನಿರ್ದೇಶಿಸಲಾಗಿರುತ್ತದೆ.<br><br>ಮುಂದುವರೆದು, ಗ್ರೂಪ್ 'ಸಿ' ವೃಂದದ ನೌಕರರಿಗೆ ಸಂಬಂಧಿಸಿದಂತೆ NIC ರವರೊಂದಿಗೆ ಸಮಾಲೋಚಿಸಲಾಗುತ್ತಿದೆ. |

| | | |
|---|---|---|
| ಉ) | ಸಿಆಸು ಇಲಾಖೆಯಿಂದ ಬಡ್ತಿ, ಜೇಷ್ಠತಾ ಪಟ್ಟಿ ಪ್ರಕಟಣೆ, ವಾರ್ಷಿಕ ಕಾರ್ಯನಿರ್ವಹಣಾ ವರದಿ, ಇನ್ನು ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ಆದೇಶ/ ಸುತ್ತೋಲೆಗಳನ್ನು ಶಾಲಾ ಶಿಕ್ಷಣ ಇಲಾಖೆಯಲ್ಲಿ ಸಮಯೋಚಿತವಾಗಿ ಅನುಷ್ಠಾನಗೊಳಿಸುವಲ್ಲಿ ವಿಳಂಬ ಮತ್ತು ವಿಫಲವಾಗುತ್ತಿರಲು ಕಾರಣಗಳೇನು; ಸಮಯೋಚಿತವಾಗಿ ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಬಡ್ತಿ, ಜೇಷ್ಠತಾ ಪಟ್ಟಿ ಪ್ರಕಟಣೆ, ವಾರ್ಷಿಕ ಕಾರ್ಯನಿರ್ವಹಣಾ ವರದಿ ಸೇರಿದಂತೆ ಸೇವಾ ವಿಷಯಗಳಿಗೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳತ ಸುಧಾರಣಾ ಇಲಾಖೆಯು ಕಾಲ-ಕಾಲಕ್ಕೆ ಹೊರಡಿಸಿರುವ ಆದೇಶ, ಸುತ್ತೋಲೆಗಳನ್ನು ಇಲಾಖೆಯಲ್ಲಿ ಪಾಲಿಸಲಾಗುತ್ತಿದೆ. |

**ಸಂಖ್ಯೆ**:ಇಪಿ 119 ಎಸ್ ಟಿಬಿ 2025

**( ಎಸ್. ಮಧು ಬಂಗಾರಪ್ಪ )**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.